148th, ಕ್ರ.ಸಂ.46

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಯು.ಬಿ.ವೆಂಕಟೇಶ್, ಇವರು ಪ್ರಸ್ತಾಪಿಸಿರುವ ಶೂನ್ಯವೇಳೆ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಉತ್ತರ**

ಪ್ರಶ್ನೆ:

ಮೂರು ರಾಜ್ಯಗಳಿಗೆ ಸಾರಿಗೆ ಸಂಪರ್ಕ ಕೇಂದ್ರ ಸ್ಥಾನವಾಗಿರುವ ಬೆಳಗಾವಿ ನಗರದ ಕೇಂದ್ರ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳುವ ಮುನ್ನವೇ ಇಂದು ಉದ್ಘಾಟನೆಗಳುತ್ತಿರುವ ಬಗ್ಗೆ "ಅಪೂರ್ಣ ಬಸ್ ನಿಲ್ದಾಣ ಉದ್ಘಾಟನೆ ನಾಳೆ" ಎನ್ನುವ ಶಿರೋನಾಮೆಯಡಿ ನಿನ್ನೆ ದಿನಾಂಕ:26.12.2022ರ ವಿಜಯವಾಣಿ ಪತ್ರಿಕೆಯಲ್ಲಿ ವರದಿ ಪ್ರಕಟವಾಗಿರುತ್ತದೆ.

ಬೆಳಗಾವಿ ನಗರದ ಹೃದಯಭಾಗದಲ್ಲಿನ ಸುಮಾರು 9 ಎಕರೆ ವಿಶಾಲ ಪ್ರದೇಶದಲ್ಲಿ 2016ರ ಡಿಸೆಂಬರ್‌ನಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಕಾಮಗಾರಿಗೆ ಚಾಲನೆ ನೀಡಲಾಗಿತ್ತು. ಅಲ್ಲದೆ 2018ರ ಫೆಬ್ರವರಿ ಹೊತ್ತಿಗೆ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕ ಸೇವೆಗೆ ಮುಕ್ತಗೊಳಿಸುವಂತೆ ಸರ್ಕಾರ ಸೂಚನೆ ನೀಡಿತ್ತು. ಆದರೆ 2022 ಪೂರ್ಣಗೊಳ್ಳುತ್ತಿದ್ದರೂ ಕಳೆದ 6 ವರ್ಷಗಳಿಂದ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದ್ದು, ಕಾಮಗಾರಿ ಅರ್ಧದಷ್ಟೂ ಪೂರ್ಣಗೊಂಡಿರದಿದ್ದರೂ ತರಾತುರಿಯಲ್ಲಿ ಉದ್ಘಾಟನೆ ದಿನಾಂಕ ಘೋಷಿಸಿರುವುದು ಆಶ್ಚರ್ಯವಾಗಿರುತ್ತದೆ.

ಈಗಾಗಲೇ ಗುತ್ತಿಗೆ ಕಾಲಾವಧಿ ಮುಗಿದು ಬರೋಬ್ಬರಿ 4 ವರ್ಷ ಕಳೆದಿದ್ದರೂ ಅಂದಾಜು 40 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಕೇಂದ್ರ ಬಸ್ ನಿಲ್ದಾಣ ಕಾಮಗಾರಿ ಮಾತ್ರ ಪೂರ್ಣಗೊಂಡಿಲ್ಲ. ನಿಲ್ದಾಣದಲ್ಲಿ ವಿಶ್ರಾಂತಿ ಗೃಹ, ನೀರು, ಶೌಚಗೃಹ, ಪಾರ್ಕಿಂಗ್, ವಿದ್ಯುತ್ ನಾಮಫಲಕ ಸೌಲಭ್ಯಗಳಿಲ್ಲದಿರುವುದರಿಂದ ಮೂರು ರಾಜ್ಯಗಳಿಗೆ ಸಂಚರಿಸುವ ಬಸ್ ಪ್ರಯಾಣಿಕರ ಆಕ್ರೋಶಕ್ಕೆ ಕಾರಣವಾಗಿರುತ್ತದೆ.

ರಾಜ್ಯದಲ್ಲಿ ಬೆಂಗಳುರು ಮಹಾನಗರ ಹೊರತುಪಡಿಸಿದರೆ ನೆರೆಯ ಗೋವಾ, ಮಹಾರಾಷ್ಟ್ರಗಳೊಂದಿಗೆ ಬೆಳಗಾವಿ ನಗರ ಸಾರಿಗೆಯು ಅತಿ ಹೆಚ್ಚು ಸಂಪರ್ಕ ಹೊಂದಿದೆ. ದಿನನಿತ್ಯ 500 ರಿಂದ 800 ಬಸ್‌ಗಳು ಬಂದುಹೋಗುತ್ತಿದ್ದು, 1 ಲಕ್ಷಕೂ ಅಧಿಕ ಪ್ರಯಾಣಿಕರು ಈ ನಿಲ್ದಾಣವನ್ನು ಅವಲಂಬಿಸಿದ್ದಾರೆ. ಲಕ್ಷಲಕ್ಷ ಆದಾಯವಿದ್ದರೂ ಆದಾಯದಲ್ಲಿ ಮಾತ್ರ ಆರ್ಥಿಕ ನಷ್ಟ ಎಂದು ಬಿಂಬಿಸಲಾಗುತ್ತಿದೆ.

ಆದಕಾರಣ, ನಮ್ಮ ಸರ್ಕಾರದ ಅವಧಿಯಲ್ಲಿ ಶಂಕುಸ್ಥಾಪನೆ ನೆರವೇರಿಸಿ ಪ್ರಾರಂಭಗೊಂಡ ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿಗೆ ವೇಗ ನೀಡಿ ಬಸ್ ಪ್ರಯಾಣಿಕರಿಗೆ ಅವಶ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿದ ತರುವಾಯವೇ ಲೋಕಾರ್ಪಣೆಗೊಳಿಸಬೇಕೆಂದು ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣ ಸಚಿವರನ್ನು ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತೇನೆ.

ಉತ್ತರ:

ದಿನಾಂಕ 26.12.2022ರ ವಿಜಯವಾಣಿ ಪತ್ರಿಕೆಯಲ್ಲಿ ಪ್ರಕಟವಾದ "ಅಪೂರ್ಣ ಬಸ್ ನಿಲ್ದಾಣ ಉದ್ಘಾಟನೆ ನಾಳೆ" ಎಂಬ ಶಿರೋನಾಮೆಯಡಿ ಪ್ರಕಟವಾದ ವರದಿಯು ಸತ್ಯಕ್ಕೆ ದೂರವಾಗಿರುತ್ತದೆ.

ಬೆಳಗಾವಿಯಲ್ಲಿ ನೂತನ ಬಸ್ ನಿಲ್ದಾಣವನ್ನು ರೂ.30.00 ಕೋಟಿ ಅಂದಾಜು ವೆಚ್ಚದಲ್ಲಿ ದಿನಾಂಕ:27.02.2017ರಂದು ಪ್ರಾರಂಭಿಸಲಾಗಿದೆ. ಕಾಮಗಾರಿಯು ಕರಾರು ಒಪ್ಪಂದದನ್ವಯ ದಿನಾಂಕ:26.11.2019ರಂದು ಪೂರ್ಣಗೊಳ್ಳಬೇಕಾಗಿತ್ತು. ಆದರೆ ಕಾಮಗಾರಿಯನ್ನು ಹಾಲಿ ಬಸ್ ನಿಲ್ದಾಣದ ಜಾಗದಲ್ಲಿಯೇ ನಿರ್ಮಿಸಲಾಗುತ್ತಿದ್ದರಿಂದ, ಹಂತಹಂತವಾಗಿ ಬಸ್ ನಿಲ್ದಾಣದ ಕಾರ್ಯಾಚಾರಣೆಗೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡು ನಿರ್ಮಿಸಬೇಕಾಗಿದ್ದರಿಂದ, ವಿಳಂಬಕ್ಕೆ ಪ್ರಮುಖ ಕಾರಣವಾಗಿರುತ್ತದೆ. ಅಲ್ಲದೇ ನಗರ ಸಾರಿಗೆ ಬಸ್ ನಿಲ್ದಾಣವನ್ನು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿದ್ದರಿಂದ ಸದರಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ನಡೆಸುತ್ತಿದ್ದ ಬಸ್‌ಗಳನ್ನು ಸಹ ಕೇಂದ್ರ ಬಸ್ ನಿಲ್ದಾಣದ ಜಾಗದಲ್ಲಿಯೇ ಅವಕಾಶ ಮಾಡಿಕೊಟ್ಟಿರುವುದರಿಂದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ.

ಕಳೆದ ಎರಡು ವರ್ಷಗಳಿಂದ ಅಕಾಲಿಕ ಮಳೆಯಿಂದಾಗಿ ಕಾಮಗಾರಿ ಕೆಲಸ ನಿಧಾನವಾಗಿರುತ್ತದೆ ಮತ್ತು ಕೋವಿಡ್–19ರಿಂದಾಗಿ ಕಾಮಗಾರಿ ಕೆಲಸ ನಿರ್ವಹಿಸುವ ಕಾರ್ಮಿಕರು ಸ್ವಂತ ಊರುಗಳಿಗೆ ತೆರಳಿದ್ದರಿಂದ ನಿರ್ಮಾಣ ಕೆಲಸವು ತಡವಾಗಿರುತ್ತದೆ. ಕೋವಿಡ್–19ರ ಎರಡನೇ ಅಲೆಯ ನಂತರದಲ್ಲಿ ನಿರ್ಮಾಣ ಕಾರ್ಯವು ನಿರೀಕ್ಷಿತ ಮಟ್ಟದಲ್ಲಿ ನಡೆದಿರುತ್ತವೆ. ಈಗಾಗಲೇ ಬಹುತೇಕ ಎಲ್ಲ ಕಾಮಗಾರಿಗಳು ಪೂರ್ಣಗೊಂಡಿದ್ದು, ಕೆಲವೊಂದು ಚಿಕ್ಕಪುಟ್ಟ ಸರಿಪಡಿಸುವಿಕೆ ಕೆಲಸಗಳು ಹಾಗೂ ಹೆಚ್ಚುವರಿಯಾಗಿ ಕೈಗೊಂಡ ಕಾಮಗಾರಿಗಳು ಮಾತ್ರ ಪ್ರಗತಿಯಲ್ಲಿವೆ. ಸಾರ್ವಜನಿಕ ಪ್ರಯಾಣಿಕರಿಗೆ ಹೆಚ್ಚಿನ ತೊಂದರೆ ತಪ್ಪಿಸಲು ಮತ್ತು ಸಾರ್ವಜನಿಕ ಪ್ರಯಾಣಿಕರ ಹಿತದೃಷ್ಟಿಯಿಂದ ಬಸ್ ನಿಲ್ದಾಣವನ್ನು ಲೋಕಾರ್ಪಣೆಗೊಳಿಸಲಾಗುತ್ತಿದೆ.

ನೂತನ ಬಸ್ ನಿಲ್ದಾಣದಲ್ಲಿ ಉಪಹಾರ ಗೃಹ, ಶುದ್ಧ ಕುಡಿಯುವ ನೀರಿನ ಘಟಕ, ಸಂಚಾರ ನಿಯಂತ್ರಕರ ಕೊಠಡಿ, ಸಹಾಯವಾಣಿ, ಶೌಚಾಲಯಗಳು, ಮಹಿಳಾ ಪ್ರಯಾಣಿಕರ ವಿಶ್ರಾಂತಿ ಗೃಹ, ವಿದ್ಯುತ್ ವ್ಯವಸ್ಥೆ ಮತ್ತು ನಾಮಫಲಕ, ಮುಂಗಡ ಟಿಕೆಟ್ ಕಾಯ್ದಿರಿಸುವಿಕೆ, ಪೋಸ್ಟ್ ಆಫೀಸ್, ಪೋಲಿಸ್ ಚೌಕಿ, ಎ.ಟಿ.ಎಮ್.ಕೌಂಟರ್, ವಾಣಿಜ್ಯ ಮಳಿಗೆಗಳು, ವಿಶೇಷ ಚೇತನರಿಗೆ ವಿಶೇಷ ಪಥ ಮತ್ತು ಶೌಚಾಲಯ, ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

ಸಂಖ್ಯೆ: ಟಿಡಿ 363 ಟಿಸಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು